# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(2)ಪಿಆರ್/62/2019-20

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ:

## ಕಛೇರಿ ಆದೇಶ

ವಿಷಯ: ಕೋವಿಡ್-19 ಕೊರೋನಾ ವೈರಸ್‌ದಿಂದ ಲಾಕ್‌ಡೌನ್ ಮಾಡಿರುವ ಹಿನ್ನೆಲೆಯಲ್ಲಿ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ: 28-06-2020.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರವು ಉಲ್ಲೇಖಿತದ ಆದೇಶದಲ್ಲಿ "ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು, ಕಛೇರಿಗಳು, ಬೋರ್ಡುಗಳು ಮತ್ತು ಕಾರ್ಪೋರೇಷನ್ನುಗಳು (ತುರ್ತು ಮತ್ತು ಅಗತ್ಯ ಸೇವೆಗಳನ್ನು ಒದಗಿಸುವಂತಹ ಇಲಾಖೆಗಳು, ಕಛೇರಿಗಳು, ಬೋರ್ಡುಗಳು ಮತ್ತು ಕಾರ್ಪೋರೇಷನ್ನುಗಳನ್ನು ಹೊರತುಪಡಿಸಿ) ಈಗಿರುವ ಎರಡನೇ ಶನಿವಾರ ಮತ್ತು ನಾಲ್ಕನೇ ಶನಿವಾರಗಳನ್ನು ಸೇರಿಸಿಕೊಂಡಂತೆ 2020ರ ಜುಲೈ 10 ರಿಂದ ಎಲ್ಲಾ ಶನಿವಾರಗಳಂದು, ದಿನಾಂಕ: 08-08-2020ರ ವರೆಗೆ ಮುಚ್ಚಲ್ಪಡುತ್ತವೆ ಎಂದು ಆದೇಶಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ತುರ್ತು ಮತ್ತು ಅಗತ್ಯ ಸೇವೆಗಳನ್ನು ಒದಗಿಸುತ್ತಿರುವುದರಿಂದ ಜುಲೈ 10 ರಿಂದ ಎಲ್ಲಾ ಶನಿವಾರಗಳಂದು, ದಿನಾಂಕ: 08-08-2020ರ ವರೆಗೆ ಪಾಲಿಕೆಯ ಗ್ರೂಪ್ ಎ, ಬಿ, ಸಿ ಮತ್ತು ಡಿ ವೃಂದದ ಎಲ್ಲಾ ಅಧಿಕಾರಿಗಳು / ಸಿಬ್ಬಂದಿಗಳು ಶೇ. 100 ರಷ್ಟು ಕರ್ತವ್ಯಕ್ಕೆ ಹಾಜರಾಗಲು ಆದೇಶಿಸಿದೆ.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಿಶೇಷ ಆಯುಕ್ತರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರು / ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಕಛೇರಿ ಪ್ರತಿ.

Scanned with CamScanner